**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 64 ಇಎಸ್‌ಟಿ (7) 2013

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು–560 001,
ದಿನಾಂಕ: 27.03.2014.

**ಸುತ್ತೋಲೆ**

**ವಿಷಯ:** ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ ಕಿರಿಯ ತಾಂತ್ರಿಕ ಶಾಲೆಗಳ ಅಧಿಕಾರಿ/ಸಿಬ್ಬಂದಿ ವರ್ಗದವರು ಕೇಂದ್ರ ಕಾರ್ಯಸ್ಥಾನವನ್ನು ಬಿಡಲು ಅನುಮತಿ ಕೋರುವ ಬಗ್ಗೆ.

* – * – * – *

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳು/ಸ್ಟೆರಿಕ್/ಜಿ.ಆರ್.ಐ.ಸಿ.ಪಿ/ಎಸ್.ಆರ್.ಸಿ.ಐ.ಟಿ.ಎಂ ಹಾಗೂ ಚಿತ್ರಕಲಾ ಶಾಲೆಗಳು/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಲವು ಅಧಿಕಾರಿ/ಸಿಬ್ಬಂದಿ ವರ್ಗದವರು ಇಲಾಖೆಯ ಮುಖ್ಯಸ್ಥರಾದ ನಿರ್ದೇಶಕರಿಂದ ಪೂರ್ವಾನುಮತಿ ಪಡೆಯದೇ ಕೇಂದ್ರ ಕಛೇರಿಗೆ ಬರುತ್ತಿರುವುದು ಕಂಡು ಬಂದಿದೆ. ಇನ್ನು ಮುಂದೆ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರು ಕೇಂದ್ರ ಕಾರ್ಯಸ್ಥಾನವನ್ನು ಬಿಟ್ಟು ಸಚಿವಾಲಯಗಳು, ವಿಧಾನಸೌಧ, ವಿಕಾಸಸೌಧ, ಕೇಂದ್ರ ಕಛೇರಿ ಮತ್ತು ಇತರೆ ಸ್ಥಳಗಳಿಗೆ ಭೇಟಿ ನೀಡಲು ನಿರ್ದೇಶಕರಿಂದ ಪೂರ್ವಾನುಮತಿಯನ್ನು ಪಡೆಯಬೇಕೆಂದು ಈ ಮೂಲಕ ಆದೇಶಿಸಲಾಗಿದೆ.

ನಿರ್ದೇಶಕರ ಪೂರ್ವಾನುಮತಿ ಪಡೆಯದೇ ಕೇಂದ್ರ ಸ್ಥಾನವನ್ನು ಬಿಟ್ಟು ಮೇಲ್ಕಂಡ ಕಛೇರಿಗಳಿಗೆ ಭೇಟಿ ನೀಡುವ ಅಧಿಕಾರಿ/ಸಿಬ್ಬಂದಿ ವರ್ಗದವರ ವಿರುದ್ಧ ಕೆ.ಸಿ.ಎಸ್ (ನಡತೆ) ನಿಯಮಗಳಿಗನುಸಾರ ಸೂಕ್ತ ಶಿಸ್ತಿನ ಕ್ರಮವನ್ನು ಕೈಗೊಳ್ಳಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

**ನಿರ್ದೇಶಕರು**

**ಇವರಿಗೆ,**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳು/ಸ್ಟೆರಿಕ್/ ಜಿ.ಆರ್.ಐ.ಸಿ.ಪಿ/ ಎಸ್.ಆರ್.ಸಿ.ಐ.ಟಿ.ಎಂ ಹಾಗೂ ಚಿತ್ರಕಲಾ ಶಾಲೆಗಳು/ಕಾಲೇಜುಗಳ ಎಲ್ಲಾ ಪ್ರಾಂಶುಪಾಲರಿಗೆ ಮತ್ತು ಇತರ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ – ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಪ್ರತಿ: ಇವರಿಗೆ ಮಾಹಿತಿಗಾಗಿ:**

1. ಎಲ್ಲಾ ಜಂಟಿ ನಿರ್ದೇಶಕರುಗಳಿಗೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಆಡಳಿತಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಸಹಾಯಕ ಆಡಳಿತಾಧಿಕಾರಿಗಳು (1) (2) (3), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
4. ಎಲ್ಲಾ ರಿಜಿಸ್ಟ್ರಾರ್‌ಗಳಿಗೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ನಿರ್ದೇಶಕರ ಆಪ್ತಶಾಖೆಗೆ.
6. ನಿರ್ದೇಶನಾಲಯದ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ.
7. ಇ–ಆಡಳಿತ ಘಟಕಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸುವುದು.

Rk-E-7-Circular